**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.1098/2024**

**ಫಿರ್ಯಾದುದಾರರು:** ಕೆ.ಸಿ.ರಾಮದಾಸ್, ಬಿನ್ ಚಿಕ್ಕಚೆನ್ನಪ್ಪ,
ವಯಸ್ಸು 69ವರ್ಷ, ವಾಸಃ ಇ.ಡಬ್ಲ್ಯೂ.ಎಸ್.20,
Non Hudco, ಕೆ.ಹೆಚ್.ಬಿ.ಕಾಲೋನಿ,
ಕಲ್ಕುಣಿಕೆ, ಹುಣಸೂರು ಟೌನ್.

**– ವಿರುದ್ಧ –**

**ಆರೋಪಿ:** ಮಣಿಯಮ್ಮ, ಕೋಂ ನಾಗರಾಜು,
ವಯಸ್ಸು 56ವರ್ಷ, ವಾಸಃ ಯಮಗುಂಭ ಗ್ರಾಮ,
ಕೊತ್ತೇಗಾಲ ಗ್ರಾಮ ಮತ್ತು ಪೋಸ್ಟ್,
ಹನಗೋಡು ಹೋಬಳಿ, ಹುಣಸೂರು ತಾಲ್ಲೂಕು.

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆಯ ಕಲಂ 351 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಕೆ.ಸಿ.ರಾಮದಾಸ್ ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿಯಿತು |
| ಪ್ರಶ್ನೆ 2: | ಪಿ.ಡಬ್ಲ್ಯೂ.1 ಕೆ.ಸಿ.ರಾಮದಾಸ್ ರವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು, ನಿಮ್ಮ ಗಂಡ ನಾಗರಾಜು ಬಿನ್ ನಿಂಗಯ್ಯ ಮತ್ತು ಅವರು ಹಲವಾರು ವರ್ಷಗಳಿಂದ ಪರಿಚಯಸ್ಥರಾಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ಅವರಿಂದ ದಿನಾಂಕಃ 29.07.2021ರಂದು ನಿಮ್ಮ ಕಾನೂನುಬದ್ದ ಅವಶ್ಯಕತೆಗಾಗಿ ರೂ.1,50,000/-ಗಳನ್ನು 2% ಬಡ್ಡಿಯೊಂದಿಗೆ ಮರುಪಾವತಿಸುವುದಾಗಿ ಹೇಳಿ, ಆರೋಪಿಯಾದ ನೀವು ಮತ್ತು ನಿಮ್ಮ ಗಂಡ ಇಬ್ಬರೂ ಡಿ.ಪಿ.ನೋಟ್ ಮತ್ತು ಹಣ ಸಂದ ರಶೀದಿಯನ್ನು ಬರೆದುಕೊಟ್ಟು ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ತೀರುವಳಿಗಾಗಿ 25.06.2024 ರ ದಿನಾಂಕ ನಮೂದಿಸಿ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕೊತ್ತೇಗಾಲ ಶಾಖೆಯ ಚೆಕ್ ಸಂಃ 828382 ಅನ್ನು ರೂ.2,50,000/-ಗಳನ್ನು ಫಿರ್ಯಾದುದಾರರಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಕರ್ನಾಟಕ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "Referred to Drawer" ಎಂಬ ಕಾರಣಕ್ಕೆ ಸದರಿ ಚೆಕ್ ದಿನಾಂಕಃ 26.06.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 03.07.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸನ್ನು ನೀಡಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ನೋಟೀಸ್ ನಿಮಗೆ ಜಾರಿಯಾಗಿದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೇಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರ ಮತ್ತು ದೂರನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |

| | |
|---|---|
| ಉತ್ತರ: | ಸುಳ್ಳು |
| ಪ್ರಶ್ನೆ 10: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇದೆ |
| ಪ್ರಶ್ನೆ 11: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇದೆ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 06.08.2025.

ANITHA
Digitally signed by ANITHA
Date: 2025.08.06 18:16:27 +0530

(ಅನಿತ)

**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ